# ಕರ್ನಾಟಕ ಸರ್ಕಾರ

ನಂ.ಗ್ರಾಅಪ/27/ಗ್ರಾಪಂಸಿ/2015

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 09-03-2016

ಸುತ್ತೋಲೆ

ವಿಷಯ: ರಾಜ್ಯದಲ್ಲಿನ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆ ಪಾವತಿ ಮಾಡುವಲ್ಲಿ ವಿಳಂಬವಾಗುತ್ತಿರುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 234 ಗ್ರಾಪಂಅ 2007 ದಿನಾಂಕ:27-03-2008.
2. ಕಾರ್ಮಿಕ ಇಲಾಖೆಯ ಅಧಿಸೂಚನೆ ಸಂಖ್ಯೆ:ಕಾಇ 152 ಎಲ್ ಡ್ಬ್ಯೂಎ 2008 ದಿನಾಂಕ:21-02-2011.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 20 ಗ್ರಾಪಂಸಿ 2011 ದಿನಾಂಕ: 12-04-2011.
4. ಕಾರ್ಮಿಕ ಆಯುಕ್ತರು ಇವರ ಕಛೇರಿ ಆದೇಶ ಸಂಖ್ಯೆ: ಕವೇಕಾ-2/ಸಿಆರ್-11/2012-13, ದಿನಾಂಕ:16-07-2012.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಗ್ರಾಮ ಪಂಚಾಯತಿ ನೌಕರರ ಬೇಡಿಕೆಗಳ ಬಗ್ಗೆ ದಿನಾಂಕ: 22-02-2016 ರಂದು ನಡೆದ ಸಭೆಯ ನಡವಳಿಗಳು.

---

ಉಲ್ಲೇಖ (1) ರ ಸರ್ಕಾರದ ಆದೇಶದಲ್ಲಿ ಸರ್ಕಾರದಿಂದ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡುವ ಶಾಸನಬದ್ಧ ಅನುದಾನದಲ್ಲಿ ಶೇ 40 ರಷ್ಟು ಅನುದಾನವನ್ನು ಗ್ರಾಮ ಪಂಚಾಯತಿ ನೌಕರರ ವೇತನಕ್ಕಾಗಿ ಬಿಡುಗಡೆ ಮಾಡುವ ಬಗ್ಗೆ ತಿಳಿಸಲಾಗಿದೆ.

ಉಲ್ಲೇಖ (2) ರ ಕಾರ್ಮಿಕ ಇಲಾಖೆಯ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯಾದ್ಯಂತ ಯಾವುದೇ "ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಟ್ಟಣ ಮತ್ತು ಗ್ರಾಮ ಪಂಚಾಯತಿ ಸಂಸ್ಥೆಗಳು" ಉದ್ದಿಮೆಯಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಇಂದಿನ ಎಲ್ಲಾ ಅಧಿಸೂಚನೆಗಳನ್ನು ರದ್ದುಪಡಿಸಿ ಸದರಿ ಅಧಿಸೂಚನೆಯು ರಾಜ್ಯ ಪತ್ರದಲ್ಲಿ ಪ್ರಕಟಗೊಂಡ ದಿನಾಂಕದಿಂದ ಅನ್ವಯವಾಗುವಂತೆ ಕನಿಷ್ಠ ವೇತನವನ್ನು ನಿಗದಿಪಡಿಸಿ ಆದೇಶಿಸಿದೆ. ಅದರಂತೆ ವೇತನ ಪಾವತಿಸುವ ಬಗ್ಗೆ ಉಲ್ಲೇಖ (3) ರ ಸರ್ಕಾರದ ಪತ್ರದಲ್ಲಿ ಕಾರ್ಮಿಕ ಇಲಾಖೆಯ ಅಧಿಸೂಚನೆಯಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಸಿಬ್ಬಂದಿಗಳಿಗೆ ಪರಿಷ್ಕೃತ ವೇತನ ಪಾವತಿಸಲು ಕ್ರಮ ತೆಗೆದುಕೊಳ್ಳುವಂತೆ ಹಾಗೂ ಪರಿಷ್ಕೃತ ವೇತನ ಪಾವತಿ ಮಾಡಲು ಬೇಕಾಗುವ ಅನುದಾನವನ್ನು ತೆರಿಗೆಗಳು ಲೈಸೆನ್ಸ್ ಶುಲ್ಕ ಇತ್ಯಾದಿಗಳನ್ನು ಬಾಕಿದಾರರಿಂದ ವಸೂಲಿ ಮಾಡಿ ಪಾವತಿಸಲು ತಿಳಿಸಲಾಗಿದೆ. ಉಲ್ಲೇಖ (4) ರ ಕಾರ್ಮಿಕ ಆಯುಕ್ತರ ಕಛೇರಿ ಆದೇಶದಲ್ಲಿ ನೇಮಕಾತಿ ಅನುಮೋದನೆಗೊಳ್ಳುವುದಕ್ಕೂ ಮತ್ತು ಕನಿಷ್ಠ ವೇತನ ಪಾವತಿಗೆ ಯಾವುದೇ ಸಂಬಂಧವಿರುವುದಿಲ್ಲ. ಆದ ಕಾರಣ ಜಿಲ್ಲೆಗಳ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಮತ್ತು ಕಾರ್ಯದರ್ಶಿಗಳಿಗೆ ಸೂಕ್ತ ತಿಳುವಳಿಕೆ ನೀಡಲು ಸೂಚಿಸುತ್ತಾ, ಕನಿಷ್ಠ ವೇತನ ಪಾವತಿ ಮಾಡದೆ ಇರುವ ಪ್ರಕರಣಗಳು ಕಂಡು ಬಂದಲ್ಲಿ ಕನಿಷ್ಠ ವೇತನ ಕಾಯ್ದೆ, 1948 ರ ಪರಿಚ್ಛೇದ 20 ರನ್ವಯ ಕ್ರಮ ತೆಗೆದುಕೊಳ್ಳಲು ಆದೇಶಿಸಿರುತ್ತಾರೆ.

ಸರ್ಕಾರವು ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಕಾರ್ಮಿಕ ಇಲಾಖೆಯು ನಿಗದಿಪಡಿಸಿರುವ ಕನಿಷ್ಠ ವೇತನವನ್ನು ಪಾವತಿಸುವಂತೆ ಆಗಿಂದಾಗ್ಗೆ ನಿರ್ದೇಶನಗಳನ್ನು ನೀಡಿದ್ದರೂ ಕನಿಷ್ಠ ವೇತನವನ್ನು ನಿಗದಿತ ಸಮಯದಲ್ಲಿ ಪಾವತಿಸದಿರುವುದು ಕಂಡು ಬಂದಿರುತ್ತದೆ. ಇದಲ್ಲದೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಗ್ರಾಮ ಪಂಚಾಯತಿ ನೌಕರರ ಬೇಡಿಕೆಗಳ ಬಗ್ಗೆ ದಿನಾಂಕ:22-02-2016 ರಂದು ನಡೆದ ಸಭೆಯಲ್ಲಿ ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತಿ ನೌಕರರಿಗೆ ಸರ್ಕಾರ ನಿಗದಿಪಡಿಸಿರುವ ಕನಿಷ್ಠ ವೇತನವನ್ನು ಪಾವತಿಸುತ್ತಿಲ್ಲವೆಂಬುದಾಗಿ ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘದ ಅಧ್ಯಕ್ಷರು ಸರ್ಕಾರದ ಗಮನಕ್ಕೆ ತಂದಿರುತ್ತಾರೆ.

ಮಾನ್ಯ ಸಚಿವರು ಆಯಾ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಆಯಾ ಜಿಲ್ಲೆಯ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ, ಯಾವ ಯಾವ ಗ್ರಾಮ ಪಂಚಾಯಿತಿಗಳಲ್ಲಿ ಕನಿಷ್ಠ ವೇತನ ನೀಡುತ್ತಿಲ್ಲವೆಂಬ ಬಗ್ಗೆ ಪರಿಶೀಲನೆ ಮಾಡಿ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಸೂಚಿಸಿದ್ದು, ಗ್ರಾಮ ಪಂಚಾಯತಿ ನೌಕರರಿಗೆ ಕನಿಷ್ಠ ವೇತನ ಪಾವತಿಸುತ್ತಿರುವ ಬಗ್ಗೆ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ ರವರು ಪ್ರತಿ ತಿಂಗಳು ಪ್ರಗತಿ ಪರಿಶೀಲನೆ ಮಾಡಿ ಕನಿಷ್ಠ ವೇತನ ಪಾವತಿಸದವರ ವಿರುದ್ಧ ಕ್ರಮ ಕೈಗೊಳ್ಳಲು ನಿರ್ದೇಶನ ನೀಡಿರುತ್ತಾರೆ.

ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಪಂಚಾಯಿತಿಯ ಆದಾಯದಿಂದ ವೇತನ ನೀಡುತ್ತಿರುವುದಿಲ್ಲ. ಸರ್ಕಾರದ ಅನುದಾನದಲ್ಲಿ ವೇತನ ನೀಡುತ್ತಿರುವುದಾಗಿ ಕಂಡು ಬಂದಿದ್ದು, ಗ್ರಾಮ ಪಂಚಾಯತಿ ವಾರ್ಷಿಕ ಆದಾಯದ ಶೇ 40 ರಷ್ಟು ಅನುದಾನವನ್ನು ಗ್ರಾಮ ಪಂಚಾಯತಿ ಸಿಬ್ಬಂದಿ ವೇತನಕ್ಕಾಗಿ ಉಪಯೋಗಿಸಿಕೊಳ್ಳಲು ಗ್ರಾಮ ಪಂಚಾಯತಿಗಳಿಗೆ ನಿರ್ದೇಶನ ನೀಡಲು ತೀರ್ಮಾನಿಸಲಾಗಿರುತ್ತದೆ.

ಸರ್ಕಾರದಿಂದ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡುವ ಶಾಸನಬದ್ಧ ಅನುದಾನದಲ್ಲಿ ಶೇ 40 ರಷ್ಟು ಅನುದಾನವನ್ನು ಗ್ರಾಮ ಪಂಚಾಯತಿ ನೌಕರರ ವೇತನಕ್ಕಾಗಿ ಉಪಯೋಗಿಸುವುದರ ಜೊತೆಗೆ ಗ್ರಾಮ ಪಂಚಾಯತಿ ನೌಕರರಿಗೆ ಕಾರ್ಮಿಕ ಇಲಾಖೆಯ ಅಧಿಸೂಚನೆಯಂತೆ ವೇತನ ಪಾವತಿಸಲು ಕೊರತೆಯಾಗುವ ವೇತನವನ್ನು ಗ್ರಾಮ ಪಂಚಾಯತಿಯ ವಾರ್ಷಿಕ ಆದಾಯದ ಶೇ 40 ರಷ್ಟನ್ನು ಗ್ರಾಮ ಪಂಚಾಯತಿ ಸಿಬ್ಬಂದಿ ವೇತನಕ್ಕಾಗಿ ಉಪಯೋಗಿಸಿಕೊಳ್ಳಲು ಗ್ರಾಮ ಪಂಚಾಯತಿಗಳು ಕ್ರಮ ವಹಿಸುವಂತೆ ತಿಳಿಸಿದೆ.

ಗ್ರಾಮ ಪಂಚಾಯತಿ ನೌಕರರಿಗೆ ಕನಿಷ್ಠ ವೇತನ ಪಾವತಿಸಲು ಕರ್ತವ್ಯಲೋಪವೆಸಗಿರುವ ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ವಿರುದ್ಧ ದುರ್ವತನೆ ಎಂದು ಪರಿಗಣಿಸಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರನ್ವಯ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದು. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಕರ್ನಾಟಕ ಸಿವಿಲ್ ಸೇವಾ (ಸಿಸಿಎ) ನಿಯಮಗಳು, 1957 ರನ್ವಯ ಶಿಸ್ತು ಕ್ರಮ ಜರುಗಿಸತಕ್ಕದೆಂದು ತಿಳಿಸಿದೆ.

ಗ್ರಾಮ ಪಂಚಾಯತಿ ನೌಕರರಿಗೆ ಕನಿಷ್ಠ ವೇತನ ಪಾವತಿಸುತ್ತಿರುವ ಬಗ್ಗೆ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ ರವರು ಪ್ರತಿ ತಿಂಗಳು ಪ್ರಗತಿ ಪರಿಶೀಲನೆ ಮಾಡಿ ಕನಿಷ್ಠ ವೇತನ ಪಾವತಿಸದವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಸಹ ತಿಳಿಸಿದೆ. ಈ ವಿಷಯದಲ್ಲಿ ಯಾವುದೇ ಲೋಪ ಕಂಡು ಬಂದ ಪಕ್ಷದಲ್ಲಿ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ (ಅಭಿವೃದ್ಧಿ) ರವರನ್ನು ವೈಯಕ್ತಿಕ ಜವಾಬ್ದಾರರನ್ನಾಗಿ ಮಾಡಲಾಗುವುದೆಂದೂ ಸಹ ತಿಳಿಸಲಾಗಿದೆ. ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಜವಾಬ್ದಾರಿಗಳನ್ನಾಗಿ ಮಾಡಿ ಅವರ ವಿರುದ್ಧ ಶಿಸ್ತಿನ ಕ್ರಮ ತೆಗೆದುಕೊಳ್ಳಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ತಿಳಿಸಿದೆ.

ಗ್ರಾಮ ಪಂಚಾಯತಿ ನೌಕರರ ನೇಮಕಾತಿ ಅನುಮೋದನೆಗೊಳ್ಳುವುದಕ್ಕೂ ಮತ್ತು ಕನಿಷ್ಠ ವೇತನ ಪಾವತಿಗೆ ಯಾವುದೇ ಸಂಬಂಧವಿರುವುದಿಲ್ಲವಾದ್ದರಿಂದ ರಾಜ್ಯದ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಕಾರ್ಮಿಕ ಇಲಾಖೆಯ ಅಧಿಸೂಚನೆಯಂತೆ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆಯನ್ನು ಪ್ರತಿ ತಿಂಗಳ 05ನೇ ತಾರೀಖಿನೊಳಗಾಗಿ ತಪ್ಪದೆ ವೇತನ ಪಾವತಿ ಮಾಡಲು ಕ್ರಮ ತೆಗೆದುಕೊಳ್ಳುವಂತೆ ಸೂಚಿಸಿದೆ.

ಮೇಲ್ಕಂಡ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಉಪಕಾರ್ಯದರ್ಶಿಗಳು, ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳಿಗೆ ಮತ್ತೊಮ್ಮೆ ತಿಳಿಸಿದೆ.

(ಟಿ.ಪಿ. ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಉಪಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತಿಗಳು.
3) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
4) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.
5. ಅಧ್ಯಕ್ಷರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಧಿಕಾರಿ/ನೌಕರರ ಸಂಘ (ರಿ), ಗಾಂಧಿನಗರ, ಬೆಂಗಳೂರು.
6. ಅಧ್ಯಕ್ಷರು, ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘ (ಸಿ.ಐ.ಟಿ.ಯು), ಸಂಪಂಗಿರಾಮನಗರ, ಬೆಂಗಳೂರು.